**ಕರ್ನಾಟಕ ವಿಧಾನ ಪರಿಷತ್ತು**
**151ನೇ ಅಧಿವೇಶನ .**

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 387

ಸದಸ್ಯರ ಹೆಸರು : ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 06-12-2023 (07/12/2023)

ಉತ್ತರಿಸುವ ಸಚಿವರು : ಲೋಕೋಪಯೋಗಿ ಸಚಿವರು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿರುವ ಜಿಲ್ಲಾ ನ್ಯಾಯಾಲಯ ಹಾಗೂ ತಾಲ್ಲೂಕು ನ್ಯಾಯಾಲಯಗಳಿಗೆ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಪ್ರಸಕ್ತ ಸಾಲಿಗೆ ಲೋಕೋಪಯೋಗಿ ಇಲಾಖೆಯಿಂದ ಕೈಗೊಳ್ಳಲಾಗಿರುವ ಒಟ್ಟಾರೆ ರೂ.623.96 ಕೋಟಿ ಮೊತ್ತದ ನ್ಯಾಯಾಲಯ ಕಟ್ಟಡ ಹಾಗೂ ನ್ಯಾಯಾಂಗ ಅಧಿಕಾರಿಗಳ ವಸತಿ ಸಮುಚ್ಚಯ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ಸದರಿ ಕಾಮಗಾರಿಗಳನ್ನು ನಿಗಧಿತ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>ಅಲ್ಲದೇ, ನ್ಯಾಯಾಲಯ ಕಟ್ಟಡ ಹಾಗೂ ವಸತಿ ಗೃಹಗಳ ನಿರ್ವಹಣೆ ಕಾಮಗಾರಿಗಳನ್ನು ಸಹ ಲೋಕೋಪಯೋಗಿ ಇಲಾಖೆಗೆ ಕಟ್ಟಡಗಳ ನಿರ್ವಹಣೆ ಇದರಡಿ ಒದಗಿಸಿದ ಅನುದಾನದಲ್ಲಿ ಕೈಗೆತ್ತಿಕೊಂಡು ಸುಸ್ಥಿತಿಯಲ್ಲಿಡಲು ಸಹ ಕ್ರಮವಹಿಸಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಜಿಲ್ಲಾ ನ್ಯಾಯಾಲಯ ಮತ್ತು ತಾಲ್ಲೂಕು ನ್ಯಾಯಾಲಯಗಳಿಗೆ ಕಟ್ಟಡ ನಿರ್ಮಾಣ ಹಾಗೂ ಕಟ್ಟಡಗಳ ದುರಸ್ತಿ ಕಾಮಗಾರಿ ಮತ್ತು ಶೌಚಾಲಯಗಳ ನಿರ್ಮಾಣ ಕಾಮಗಾರಿಗೆ ಸರ್ಕಾರ ಹೆಚ್ಚು ಅನುದಾನವನ್ನು ಬಿಡುಗಡೆ ಮಾಡಲು ಯಾವ ಕ್ರಮವನ್ನು ಕೈಗೊಂಡಿದೆ? | |

ಲೋಇ/1280/ಐಎಫ್ಎ/2023

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು